ಪ್ರದೇಶದಲ್ಲಿ ಕುದುರೆಮುಖ ಕಬ್ಬಿಣದ ಅದಿರು ಕಂಪೆನಿ ನಿಯಮಿತ ಸಂಸ್ಥೆಯವರಿಗೆ ದಿನಾಂಕ: 31.12.2005ರವರೆಗೆ ಸರ್ವೋಚ್ಚ ನ್ಯಾಯಾಲಯದ ಆದೇಶದ ಪರಿಮಿತಿಯೊಳಗೆ ಕಾರ್ಯಾನುಮತಿ ನೀಡಲಾಗಿದೆ.

ಆ) ಸದರಿ ಕಂಪೆನಿಯ ಕೆಲಸಗಾರರ ಹಿತದೃಷ್ಟಿಯಿಂದ ಪರವಾನಗಿಯನ್ನು ಇನ್ನು ವಿಸ್ತರಿಸುವುದು ಸರ್ವೋಚ್ಚ ನ್ಯಾಯಾಲಯವು ರಚಿಸಿರುವ ಮಾನಿಟರಿಂಗ್ ಕಮಿಟಿ ಹಾಗೂ ಸರ್ವೋಚ್ಚ ನ್ಯಾಯಾಲಯದ ಆದೇಶದ ಮೇಲೆ ಅವಲಂಬಿಸಿದೆ.

ಇ) ಗಣಿಗಾರಿಕೆಗೆ ಅನುಮತಿ ಮುಂದುವರೆಸುವುದು ಸರ್ವೋಚ್ಚ ನ್ಯಾಯಾಲಯದ ಆದೇಶವನ್ನು ಅವಲಂಬಿಸಿದೆ.

2311(2133) ಶ್ರೀ ಕೃಷ್ಣ ಪಾಲೇಮಾರ್ ಜೆ. (ಸುರತ್ಕಲ್):- ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದ ಹೆದ್ದಾರಿಗಳಲ್ಲಿ ಕಳೆದ ಎರಡು ವರ್ಷಗಳಲ್ಲಿ ಸಂಭವಿಸುವ ಅಪಘಾತಗಳು ಎಷ್ಟು; ಇದರಿಂದ ಎಷ್ಟು ಜನರ ಜೀವ ಹಾನಿಯಾಗಿವೆ; ಹೆಚ್ಚುತ್ತಿರುವ ಅಪಘಾತಗಳನ್ನು ನಿಯಂತ್ರಿಸುವ ನಿಟ್ಟಿನಲ್ಲಿ ತುರ್ತು ಕ್ರಮಗಳೇನು;

ಆ) ನಿರ್ಲಕ್ಷತನದ ವಾಹನ ಮತ್ತು ಅವೈಜ್ಞಾನಿಕ ಡ್ರೈವಿಂಗ್ ಲೈಸೆನ್ಸ್ ನೀಡಿದೆ ಪದ್ಧತಿ ಹಾಗೂ ರಸ್ತೆಗಳ ಅವ್ಯವಸ್ಥೆಯನ್ನು ಸರಿಪಡಿಸುವಲ್ಲಿ ಸರ್ಕಾರದ ಕ್ರಮಗಳೇನು;

ಇ) ವಾಹನ ಚಾಲಕರಿಗೆ ಲೈಸೆನ್ಸ್ ನೀಡುವಾಗ ಕನಿಷ್ಟ ವಿದ್ಯಾರ್ಹತೆಯನ್ನು ಎಸ್.ಎಸ್.ಎಲ್.ಸಿ. ಎಂದು ನಿಗದಿ ಪಡಿಸುವುದರ ಜೊತೆಗೆ ಕಟ್ಟುನಿಟ್ಟಿನ ಸಾರಿಗೆ ಸಂಚಾರ ನಿಯಮಗಳ ಸಾಲಿನ ಮತ್ತಿಕೆರೆ ನಿಯಮಗಳನ್ನು ಕಡ್ಡಾಯವಾಗಿ ನಿಗದಿ ಪಡಿಸುವಲ್ಲಿ ಸರ್ಕಾರದ ಕ್ರಮಗಳೇನು;

ಈ) ರಸ್ತೆ ಅಪಘಾತಗಳನ್ನು ಕಡಿಗಟ್ಟಲು ನಿಯಂತ್ರಿಸಲು ಸರ್ಕಾರದ ಮುಂಜಾಗರೂಕತೆ ಕ್ರಮಗಳೇನು?

ಶ್ರೀ ಮಲ್ಲಿಕಾರ್ಜುನಖರ್ಗೆ (ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು):-

ಅ)

ವರ್ಷ	ಅಪಘಾತಗಳು	ಮರಣ ಹೊಂದಿದವರು
2003	37658	6195
2004	38869	6497

ನಿರ್ಲಕ್ಷ ವಾಹನ ಚಾಲಕರ ವಿರುದ್ಧ ಪ್ರಕರಣಗಳನ್ನು ದಾಖಲು ಮಾಡಲು ಮತ್ತು ಸಂಚಾರ ನಿಯಮಗಳನ್ನು ಉಲ್ಲಂಘಿಸಿದವರ ವಿರುದ್ಧ ನಿಗಾ ಇಡಲು ಎಲ್ಲಾ ಪೊಲೀಸ್ ಸೂಪರ್‌ಇಂಟೆಂಡೆಂಟ್ ರವರಿಗೆ ಸೂಚನೆ ನೀಡಲಾಗಿದೆ. ಹೆದ್ದಾರಿಗಳಲ್ಲಿ ಸೂಕ್ತ ಸುಚನಾ

ಫಲಕಗಳನ್ನು ಅಳವಡಿಸಿ ರಸ್ತೆ ತಿರುವುಗಳು, ಹುಬ್ಬುಗಳು ಇತರ ಮುಖ್ಯವಾದ ಸೂಚನೆಗಳನ್ನು ಚಾಲಕರಿಗೆ ಕಾಣುವಂತೆ ಅಳವಡಿಸಲಾಗಿದೆ.

ಆ) ಎಲ್ಲಾ ಪ್ರಾದೇಶಿಕ ಸಾರಿಗೆ ಕಛೇರಿಗಳಲ್ಲಿ ಡ್ರೈವಿಂಗ್ ಟ್ರಾಕ್ಟ್‌ರ್‌ಗಳನ್ನು ನಿರ್ಮಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಈಗಾಗಲೇ ರಾಜ್ಯದ 11 ಸಾರಿಗೆ ಕಛೇರಿಗಳಲ್ಲಿ ಡ್ರೈವಿಂಗ್ ಟ್ರ್ಯಾಕ್‌ಗಳ ಮುಖಾಂತರ ವೈಜ್ಞಾನಿಕವಾಗಿ ಅಭ್ಯರ್ಥಿಗಳನ್ನು ಪರೀಕ್ಷೆಗೆ ಒಳಪಡಿಸಿ, ಅರ್ಹ ಅಭ್ಯರ್ಥಿಗಳಿಗೆ ಮಾತ್ರ ಚಾಲನಾ ಅನುಜ್ಞಾ ಪತ್ರ ನೀಡಲಾಗುತ್ತಿದೆ.

ಅನುದಾನದ ಲಭ್ಯತೆಯನುಸಾರ ರಸ್ತೆಗಳನ್ನು ದುರಸ್ಥಿ/ಅಭಿವೃದ್ಧಿ ಕೆಲಸಗಳನ್ನು ಕಾಲಕಾಲಕ್ಕೆ ಕೈಗೊಳ್ಳಲಾಗುತ್ತಿರುತ್ತದೆ.

ಇ) ಲೈಸನ್ಸ್ ನೀಡುವಾಗ ಕನಿಷ್ಟ ವಿದ್ಯಾರ್ಹತೆಯನ್ನು ಎಸ್.ಎಸ್.ಎಲ್.ಸಿ. ಎಂದು ನಿಗದಿ ಪಡಿಸುವ ಬಗ್ಗೆ ಅವಶ್ಯಕವೆಂದು ಕಂಡುಬಂದಲ್ಲಿ ಕೇಂದ್ರ ಸರ್ಕಾರವು ನಿಯಮ ರೂಪಿಸಬೇಕಾಗುತ್ತದೆ.

ಕೇಂದ್ರ ಮೋಟಾರು ವಾಹನ ಕಾಯ್ದೆ ಮತ್ತು ನಿಯಮಗಳ ಅಡಿಯಲ್ಲಿ ಸಾರಿಗೆ ಸಂಚಾರ ನಿಯಮಗಳ ಪಾಲನೆಯನ್ನು ಕಡ್ಡಾಯಗೊಳಿಸಲಾಗಿದೆ.

ಈ) ಹೆದ್ದಾರಿಗಳಲ್ಲಿ 44 ಕೇಂದ್ರಗಳಲ್ಲಿ ಟ್ರಾಮಾಕೇರ್ ಸೆಂಟರ್‌ಗಳನ್ನು ತೆರೆದಿದ್ದು ಚಾಲಕರಿಗೆ ಸೂಕ್ತ ಸೂಚನೆಗಳನ್ನು ನೀಡಲಾಗುತ್ತಿದೆ ಮತ್ತು ರಸ್ತೆ ಸುರಕ್ಷತಾ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ವಾಹನ ಚಾಲಕರಿಗೆ, ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಹಾಗೂ ಸಾರ್ವಜನಿಕರಿಗೆ ರಸ್ತೆ ಬಳಕೆಯ ನಿಯಮಗಳ ಬಗ್ಗೆ ಮನವರಿಕೆ ಮಾಡಿಕೊಡಲಾಗುತ್ತಿದೆ.

2312(2237) ಶ್ರೀ ಕೃಷ್ಣ ಪಾಲೇಮಾರ್ ಜೆ. (ಸುರತ್ಕಲ್):- ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ದಕ್ಷಿಣ ಕನ್ನಡ ಜಿಲ್ಲೆಯ ಪಡೀಲ್ ಅಳಪೆ ರೈಲ್ವೆ ಓವರ್ ಬ್ರಿಡ್ಜ್ ನಿರ್ಮಾಣದ ಕಾಮಗಾರಿಯ ಅಂದಾಜು ವೆಚ್ಚಗಳೆಷ್ಟು (ವಿವರ ನೀಡುವುದು);

ಆ) ಸದರಿ ಕಾಮಗಾರಿಯ ಆಡಳಿತಾತ್ಮಕ ಮಂಜೂರಾತಿಗೆ ಅನುಮತಿ ನೀಡಲು ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು;

ಇ) ತ್ವರಿತಗತಿಯಲ್ಲಿ ಕಾಮಗಾರಿ ಕೈಗೊಳ್ಳಲು ಸಕಾಲಿಕ ಕ್ರಮ ಜರುಗಿಸುವಲ್ಲಿ ಸರ್ಕಾರದ ನಿಲುವುಗಳೇನು;

ಈ) ಯಾವಾಗಿನಿಂದ ಕಾಮಗಾರಿಯನ್ನು ಪ್ರಾರಂಭಿಸಲು ಕ್ರಮ ಜರುಗಿಸಲಾಗುವುದು?

ಶ್ರೀ ಧರ್ಮಸಿಂಗ್ (ಮಾನ್ಯ ಮುಖ್ಯಮಂತ್ರಿಯವರು)

ಅ) ಅಂದಾಜು ರೂ. 83 ಲಕ್ಷ.

ಆ) ರೈಲ್ವೆ ಇಲಾಖೆಯಿಂದ ಅನುಮತಿಯನ್ನು ಕೋರಲಾಗಿದೆ. ಅನುಮತಿ ದೊರೆತ ನಂತರ ಆಡಳಿತಾತ್ಮಕ ಮಂಜೂರಾತಿ ಬಗ್ಗೆ ಪರಿಶೀಲಿಸಲಾಗುವುದು.